**All India Radio: Bangalore**
**National Bulletin In Kannada**
**04.02.2026  1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**04.02.2026  1.10 p.m.**
**<><><><>**

ಮುಖ್ಯಾಂಶಗಳು

1. ಒಡಿಶಾದಲ್ಲಿಂದು ಹಲವು ಅಭಿವೃಧಿ ಯೋಜನೆಗಳ ಉದ್ಘಾಟನೆ, ಶಂಕುಸ್ಥಾಪನೆ ನೇರವೇರಿಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು
2. 'ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್' ಅನ್ನ ಯೋಜನೆಯಡಿ; ದೇಶದಲ್ಲಿ ಶೇಕಡಾ ೧೦೦ ರಷ್ಟು ಪಡಿತರ ಚೀಟಿಗಳ ಡಿಜಿಟಲೀಕರಣ
3. ಇಂದು ವಿಶ್ವ ಕ್ಯಾನ್ಸರ್ ಜಾಗೃತಿ ದಿನ; 'ಅನನ್ಯತೆಯಿಂದ ಒಗ್ಗೂಡಿ' ಧ್ಯೇಯ ವಾಕ್ಯದೊಂದಿಗೆ ಎಲ್ಲೆಡೆ ಅಭಿಯಾನ
4. ಐಸಿಸಿ ೧೯ ವರ್ಷದೊಳಗಿನವರ ಏಕದಿನ ವಿಶ್ವಕಪ್ ಕ್ರಿಕೆಟ್; ಎರಡನೇ ಸೆಮಿಫೈನಲ್‌ನಲ್ಲಿಂದು ಭಾರತದ ವಿರುದ್ಧ ಟಾಸ್ ಗೆದ್ದ ಅಫ್ಘಾನಿಸ್ತಾನ ಬ್ಯಾಟಿಂಗ್ ಆಯ್ಕೆ

<><><><>

ಒಡಿಶಾ ರಾಜ್ಯದಲ್ಲಿ ಆರು ದಿನಗಳ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ಬೆಳಿಗ್ಗೆ ತಮ್ಮ ತವರೂರಾದ ಮಯೂರ್ಭಂಜ್‌ನ ರೈರಂಗಪುರದಲ್ಲಿರುವ ಪುರಿಯ ಶ್ರೀ ಜಗನ್ನಾಥ ದೇವಾಲಯಕ್ಕೆ ಭೇಟಿ ನೀಡಿದರು.  ರಾಷ್ಟ್ರಪತಿ ಅವರು, ಇಂದು ಮಹುಲ್ಡಿಹಿಯಲ್ಲಿರುವ ಸರ್ಕಾರಿ ಬಾಲಕಿಯರ ಹೈಯರ್ ಸೆಕೆಂಡರಿ ಶಾಲೆಯಲ್ಲಿ ಬುಡಕಟ್ಟು ನಾಯಕ ಭಂಜ್‌ಬೀರ್ ಸುನಾರಾಮ್ ಸೊರೆನ್ ಅವರ ಪ್ರತಿಮೆಯನ್ನು ಅನಾವರಣಗೊಳಿಸಲಿದ್ದಾರೆ. ಅಲ್ಲಿ ಅವರು ೭೦ನೇ ವರ್ಷದ ಸಂಭ್ರಮಾಚರಣೆಯಲ್ಲಿ ಭಾಗವಹಿಸಲಿದ್ದು, ವಿದ್ಯಾರ್ಥಿಗಳು ಮತ್ತು ಶಿಕ್ಷಕರೊಂದಿಗೆ ಸಂವಾದ ನಡೆಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿಮುರ್ಮು ಅವರು, ಮಹುಲ್ಡಿಹಿಯಲ್ಲಿ ನೂತನವಾಗಿ ನಿರ್ಮಿಸಲಾದ ರಜಾ ಗೃಹವನ್ನು ಉದ್ಘಾಟಿಸಲಿದ್ದಾರೆ ಮತ್ತು ಪೂರ್ಣೇಶ್ವರ ಮಹಾದೇವನ ದೇವಾಲಯಕ್ಕೆ ಭೇಟಿ ನೀಡಲಿದ್ದಾರೆ. ನಂತರ ಅವರು, ರೈರಂಗಪುರ ಕಲೆಕ್ಟರೇಟ್ ಕ್ರೀಡಾಂಗಣದಲ್ಲಿ, ಆರೋಗ್ಯ ರಕ್ಷಣೆ, ಶಿಕ್ಷಣ, ಕ್ರೀಡೆ, ಬುಡಕಟ್ಟು ಕಲ್ಯಾಣ ಮತ್ತು ನಗರ

ಮೂಲಸೌಕರ್ಯಕ್ಕೆ ಸಂಬಂಧಿಸಿದ ಹಲವಾರು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಿಲಾನ್ಯಾಸ ನೆರವೇರಿಸಲಿದ್ದಾರೆ. ನಂತರ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

<><><>

ದೇಶದಲ್ಲಿ ಶೇಕಡಾ ೧೦೦ ರಷ್ಟು ಪಡಿತರ ಚೀಟಿಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಮತ್ತು ೯೯ ಪ್ರತಿಶತಕ್ಕೂ ಹೆಚ್ಚು ಪಡಿತರ ಚೀಟಿಗಳನ್ನು ಆಧಾರ್‌ನೊಂದಿಗೆ ಜೋಡಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಪೂರಕ ಪ್ರಶ್ನೆಗೆ ಉತ್ತರಿಸಿದ ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಖಾತೆ ರಾಜ್ಯ ಸಚಿವರಾದ ನಿಮುಬೆನ್ ಬಂಭಾನಿಯಾ, ಪ್ರಧಾನಿ ನರೇಂದ್ರ ಮೋದಿ ಆಹಾರ ಭದ್ರತೆಗೆ ಹೆಚ್ಚಿನ ಆದ್ಯತೆ ನೀಡಿದ್ದಾರೆ ಎಂದು ತಿಳಿಸಿದರು. ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯಡಿಯಲ್ಲಿ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಸುಮಾರು ೮೧ ಕೋಟಿಗೂ ಹೆಚ್ಚು ಫಲಾನುಭವಿಗಳಿಗೆ ಸರ್ಕಾರ ಉಚಿತ ಆಹಾರ ಧಾನ್ಯಗಳನ್ನು ಒದಗಿಸುತ್ತಿದೆ ಎಂದು ಅವರು ಮಾಹಿತಿ ನೀಡಿದರು. ಸಚಿವರು, ಈ ಯೋಜನೆ ವಿಶ್ವದ ಅತಿದೊಡ್ಡ ಆಹಾರ ಭದ್ರತಾ ಕಾರ್ಯಕ್ರಮವಾಗಿದೆ. ಒಂದು ರಾಷ್ಟ್ರ, ಒಂದು ಪಡಿತರ ಚೀಟಿ ಯೋಜನೆಯ ಅನುಷ್ಠಾನದೊಂದಿಗೆ, ವಲಸೆ ಕಾರ್ಮಿಕರು ಈಗ ದೇಶಾದ್ಯಂತ ಯಾವುದೇ ನ್ಯಾಯಯುತ ಬೆಲೆ ಅಂಗಡಿಗಳಿಂದ ಆಹಾರ ಧಾನ್ಯಗಳನ್ನು ಪಡೆಯಬಹುದು ಎಂದು ಹೇಳಿದರು. 'ಒಂದು ರಾಷ್ಟ್ರ, ಒಂದು ಪಡಿತರ ಚೀಟಿ' ಯೋಜನೆ ಅಡಿಯಲ್ಲಿ ೨೦೧ ಕೋಟಿಗೂ ಹೆಚ್ಚು ಸಾಗಾಣಿಕಾ ವಹಿವಾಟುಗಳನ್ನು ದಾಖಲಿಸಲಾಗಿದೆ ಎಂದು ಸಚಿವರು ಹೇಳಿದರು.

<><><>

ಇಂದು ವಿಶ್ವ ಕ್ಯಾನ್ಸರ್ ಜಾಗೃತಿ ದಿನ. ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಅದರ ತಡೆಗಟ್ಟುವಿಕೆ, ಪತ್ತೆ ಮತ್ತು ಚಿಕಿತ್ಸೆಯನ್ನು ಪ್ರೋತ್ಸಾಹಿಸಲು ಪ್ರತಿ ವರ್ಷ ಫೆಬ್ರವರಿ ೪ ರಂದು ಈ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷ, ವಿಶ್ವ ಕ್ಯಾನ್ಸರ್ ದಿನವನ್ನು 'ಅನನ್ಯತೆಯಿಂದ ಒಗ್ಗೂಡಿ' ಎಂಬ ಧ್ಯೇಯವಾಕ್ಯದೊಂದಿಗೆ ಆಚರಿಸಲಾಗುತ್ತಿದೆ. ಈ ಧ್ಯೇಯವಾಕ್ಯವು ೨೦೨೫ ರಿಂದ ಜಾರಿಯಲಿದೆ. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಜಗತ್ ಪ್ರಕಾಶ್ ನಡ್ಡಾ, ಈ ದಿನವು, ಕ್ಯಾನ್ಸರ್‌ನಿಂದ ಬದುಕುಳಿದವರನ್ನು ಬೆಂಬಲಿಸಲು ಮತ್ತು ಆರೋಗ್ಯಕರ

ಸಮಾಜಕ್ಕಾಗಿ ನಿಯಮಿತ ತಪಾಸಣೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದ್ದಾರೆ. ಪ್ರತಿ ಜಿಲ್ಲೆಯಲ್ಲಿ ಕ್ಯಾನ್ಸರ್ ಡೇ ಕೇರ್ ಘಟಕಗಳ ಸ್ಥಾಪನೆ ಮತ್ತು ಪ್ರಮುಖ ಕ್ಯಾನ್ಸರ್ ಔಷಧಿಗಳ ಮೇಲಿನ ತೆರಿಗೆ ವಿನಾಯಿತಿ ನೀಡುವುದರಿಂದ ರೋಗಿಗಳಿಗೆ ಸಹಾಯವಾಗಲಿದೆ ಎಂದು ಅವರು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಆಯುಷ್ಮಾನ್ ಆರೋಗ್ಯ ಕೇಂದ್ರಗಳು, ದೊಡ್ಡ ಪ್ರಮಾಣದ ತಪಾಸಣೆಗಳ ಮೂಲಕ ಕ್ಯಾನ್ಸರ್ ವಿರುದ್ಧದ ಹೋರಾಟವನ್ನು ಬಲಪಡಿಸುತ್ತಿವೆ. ದೇಶಾದ್ಯಂತ ಆರಂಭಿಕ ಪತ್ತೆ ಮತ್ತು ಸಕಾಲಿಕ ಚಿಕಿತ್ಸೆಯನ್ನು ಸಕ್ರಿಯಗೊಳಿಸುತ್ತಿವೆ.

<><><><>

ಐತಿಹಾಸಿಕ ಭಾರತ ಮತ್ತು ಅಮೆರಿಕ ವ್ಯಾಪಾರ ಒಪ್ಪಂದವು ಉಭಯ ದೇಶಗಳ ನಡುವಿನ ಸಂಬಂಧಗಳನ್ನು ಬಲಪಡಿಸುವ ಮತ್ತು ೨೦೪೭ ರ ವೇಳೆಗೆ ಭಾರತದ ವಿಕಸಿತ ಭಾರತ ಪ್ರಯಾಣವನ್ನು ಮುನ್ನಡೆಸುವ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಮಾತನಾಡಿದ ಸಚಿವರು, ಈ ವ್ಯಾಪಾರ ಒಪ್ಪಂದದ ಸಮಯದಲ್ಲಿ, ಭಾರತವು ಸೂಕ್ಷ್ಮ ಕ್ಷೇತ್ರಗಳಲ್ಲಿ, ವಿಶೇಷವಾಗಿ ಕೃಷಿ ಮತ್ತು ಡೈರಿ ವಲಯದಲ್ಲಿ ತನ್ನ ಹಿತಾಸಕ್ತಿಗಳನ್ನು ಯಶಸ್ವಿಯಾಗಿ ಕಾಪಾಡಿಕೊಳ್ಳಲು ಸಾಧ್ಯವಾಗಿದೆ ಎಂದು ಹೇಳಿದರು. ಈ ವರ್ಷದ ಫೆಬ್ರವರಿ ೨ ರಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಲವಾರು ದ್ವಿಪಕ್ಷೀಯ ಮತ್ತು ಜಾಗತಿಕ ವಿಷಯಗಳ ಕುರಿತು ದೂರವಾಣಿ ಸಂಭಾಷಣೆ ನಡೆಸಿದ್ದರು. ಈ ಮಾತುಕತೆಗಳ ನಂತರ, ಅಧ್ಯಕ್ಷ ಟ್ರಂಪ್ ಅಮೆರಿಕಕ್ಕೆ ಭಾರತೀಯ ರಫ್ತಿನ ಮೇಲಿನ ಸುಂಕವನ್ನು ಶೇಕಡಾ ೧೮ ಕ್ಕೆ ಇಳಿಸುವುದಾಗಿ ಘೋಷಿಸಿದರು ಎಂದು ಸಚಿವರು ತಿಳಿಸಿದ್ದಾರೆ. ಈ ದರವು ಹಲವಾರು ಇತರ ದೇಶಗಳ ಮೇಲೆ ಅಮೆರಿಕ ವಿಧಿಸಿರುವ ಸುಂಕಗಳಿಗಿಂತ ತುಲನಾತ್ಮಕವಾಗಿ ಕಡಿಮೆಯಾಗಿದೆ, ಇದು ಅಮೆರಿಕ ಮಾರುಕಟ್ಟೆಯಲ್ಲಿ ಭಾರತೀಯ ರಫ್ತಿನ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುತ್ತದೆ ಎಂದು ಅವರು ಹೇಳಿದ್ದಾರೆ.

**ಧ್ವನಿ; ಪಿಯೂಷ್ ಗೋಯಲ್ (೩೫ ಸೆಕೆಂಡ್ಸ್)**

ಈ ಒಪ್ಪಂದವು ಸಣ್ಣ ಮತ್ತು ಮಧ್ಯಮ ಉದ್ಯಮಗಳು, ಎಂಎಸ್‌ಎಂಇಗಳು, ಕೌಶಲ್ಯಪೂರ್ಣ ಕೆಲಸಗಾರರು ಮತ್ತು ಕೈಗಾರಿಕೆಗಳಿಗೆ ಹೊಸ ಅವಕಾಶಗಳನ್ನು ಕಲ್ಪಿಸುತ್ತದೆ. ವಿಶ್ವದ ಎರಡು ದೊಡ್ಡ ಪ್ರಜಾಪ್ರಭುತ್ವಗಳ ನಡುವಿನ ಆಳವಾದ ಸಂಬಂಧವನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವರು ಹೇಳಿದರು.

<><><><>

ನೀಟ್-ಪಿಜಿ ೨೦೨೫-೨೬ ರ ಅರ್ಹತಾ ಸುತ್ತಿನ ಪರೀಕ್ಷೆಯ ಕಟ್-ಆಫ್ ಶೇಕಡಾವಾರುಗಳನ್ನು ತೀವ್ರವಾಗಿ ಕಡಿಮೆ ಮಾಡುವ ರಾಷ್ಟ್ರೀಯ ವೈದ್ಯಕೀಯ ವಿಜ್ಞಾನ ಪರೀಕ್ಷಾ ಮಂಡಳಿ-ಎನ್‌ಬಿಇಎಂಎಸ್ ನ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯ ಕುರಿತು ಸುಪ್ರೀಂ ಕೋರ್ಟ್, ಇಂದು ಕೇಂದ್ರ ಮತ್ತು ಇತರ ಅಧಿಕಾರಿಗಳಿಂದ ಪ್ರತಿಕ್ರಿಯೆಗಳನ್ನು ಕೋರಿದೆ. ನ್ಯಾಯಮೂರ್ತಿಗಳಾದ ಪಿ.ಎಸ್.ನರಸಿಂಹ ಮತ್ತು ಅಲೋಕ್ ಆರಾಧೆ ಅವರನ್ನೊಳಗೊಂಡ ಪೀಠವು ಕೇಂದ್ರ, ಎನ್‌ಬಿಇಎಂಎಸ್, ರಾಷ್ಟ್ರೀಯ ವೈದ್ಯಕೀಯ ಆಯೋಗ ಮತ್ತು ಇತರ ಸಂಬಂಧಿತ ಸಂಸ್ಥೆಗಳಿಗೆ ನೋಟಿಸ್ ಜಾರಿ ಮಾಡಿದೆ. ಈ ವಿಷಯವನ್ನು ಶುಕ್ರವಾರ ಮತ್ತಷ್ಟು ವಿಚಾರಣೆಗೆ ನಿಗದಿಪಡಿಸಲಾಗಿದೆ. ದೇಶಾದ್ಯಂತ ೧೮ ಸಾವಿರಕ್ಕೂ ಹೆಚ್ಚು ಸ್ನಾತಕೋತ್ತರ ವೈದ್ಯಕೀಯ ಸೀಟುಗಳು ಖಾಲಿ ಉಳಿದಿರುವ ಕಾರಣ ಎನ್‌ಬಿಇಎಂಎಸ್, ನೀಟ್-ಪಿಜಿ ಕಟ್-ಆಫ್ ಅನ್ನು ಪರಿಷ್ಕರಿಸಿದ ನಂತರ ಈ ಅರ್ಜಿ ಬಂದಿದೆ.

ಪರಿಷ್ಕೃತ ಮಾನದಂಡಗಳ ಅಡಿಯಲ್ಲಿ, ಮೀಸಲು ವರ್ಗಗಳಿಗೆ ಅರ್ಹತಾ ಶೇಕಡಾವಾರು ಪ್ರಮಾಣವನ್ನು ೪೦ ರಿಂದ ಶೂನ್ಯಕ್ಕೆ ಇಳಿಸಲಾಗಿದ್ದು, ೮೦೦ ರಲ್ಲಿ ಮೈನಸ್ ೪೦ ಕ್ಕಿಂತ ಕಡಿಮೆ ಅಂಕಗಳನ್ನು ಹೊಂದಿರುವ ಅಭ್ಯರ್ಥಿಗಳು ಮೂರನೇ ಸುತ್ತಿನ ಕೌನ್ಸೆಲಿಂಗ್‌ನಲ್ಲಿ ಭಾಗವಹಿಸಲು ಅವಕಾಶ ಮಾಡಿಕೊಟ್ಟಿದೆ. ನೀಟ್-ಪಿಜಿ ಸೂಚನೆಯ ಪ್ರಕಾರ, ಸಾಮಾನ್ಯ ವರ್ಗದ ಕಟ್-ಆಫ್ ಅನ್ನು ೫೦ ಶೇಕಡಾವಾರುಗಳಿಂದ ೭ ಶೇಕಡಾವಾರುಗಳಿಗೆ ಗಮನಾರ್ಹವಾಗಿ ಇಳಿಸಲಾಗಿದೆ.

<><><><>

ಜಿಂಬ್ವಾಬೆಯ ಹರಾರೆ ಸ್ಪೋರ್ಟ್ಸ್ ಕ್ಲಬ್‌ನಲ್ಲಿಂದು ನಡೆಯುತ್ತಿರುವ ಐಸಿಸಿ ಹತ್ತೊಂಬತ್ತು ವರ್ಷದೊಳಗಿನವರ ಏಕದಿನ ವಿಶ್ವಕಪ್ ಕ್ರಿಕೆಟ್‌ನ ಎರಡನೇ ಸೆಮಿಫೈನಲ್‌ನಲ್ಲಿ ಭಾರತ ಹಾಗೂ ಅಫ್ಘಾನಿಸ್ತಾನ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದು, ಮೊದಲು ಬ್ಯಾಟಿಂಗ್ ಮಾಡುತ್ತಿರುವ ಅಫ್ಘಾನಿಸ್ತಾನ್, ಇತ್ತೀಚಿನ ವರದಿಯಂತೆ ೧ ಓವರ್‌ಗಳಲ್ಲಿ ಯಾವುದೇ ವಿಕೆಟ್

ನಷ್ಟವಿಲ್ಲದೇ ೭ ರನ್ ಮಾಡಿ ಆಡುತ್ತಿದೆ. ಈ ಪಂದ್ಯದ ವಿಜೇತರು, ಶುಕ್ರವಾರ ನಡೆಯಲಿರುವ ಫೈನಲ್‌ನಲ್ಲಿ ಇಂಗ್ಲೆಂಡ್ ವಿರುದ್ಧ ಸೆಣಸಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>